# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 175 (269)
2. ಸದಸ್ಯರ ಹೆಸರು : ಶ್ರೀ ಐವನ್ ಡಿ ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 09.12.2025
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಗಳೂರು ವಿಮಾನ ನಿಲ್ದಾಣದ ವಿಸ್ತರಣೆಗೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಕಾರ್ಯ ಯಾವ ಹಂತದಲ್ಲಿದೆ; ಈ ಬಗ್ಗೆ ಕೈಗೊಂಡಿರುವ ಕ್ರಮವೇನು; (ವಿವರ ಒದಗಿಸುವುದು) | ಮಂಗಳೂರು ವಿಮಾನ ನಿಲ್ದಾಣದ ರನ್-ವೇ ಬೇಸಿಕ್ ಸ್ಟ್ರಿಪ್ ಮತ್ತು RESA (Runway End Safety Area) ವಿಸ್ತರಣೆಗಾಗಿ ಸುಮಾರು 36 ಎಕರೆ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಜಿಲ್ಲಾಡಳಿತವು ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿದೆ. ಅವಶ್ಯವಿರುವ ಜಮೀನುಗಳ ಭೂಸ್ವಾಧೀನ ವೆಚ್ಚವನ್ನು ಭರಿಸಿ ಕಾಮಗಾರಿಯನ್ನು ಕೈಗೊಳ್ಳಲು ಕ್ರಮ ವಹಿಸುವಂತೆ ಭಾರತೀಯ ವಿಮಾಣ ನಿಲ್ದಾಣ ಪ್ರಾಧಿಕಾರ (AAI) ಸಂಸ್ಥೆಯನ್ನು ಕೋರಲಾಗಿದೆ. |
| (ಆ) | ಪ್ರಸ್ತುತ ವಿಮಾನ ನಿಲ್ದಾಣ ವಿಸ್ತರಣೆಯಾಗದೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಗುರಿಮುಟ್ಟಲು ಸಾಧ್ಯವಾಗುತ್ತಿಲ್ಲ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು; | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹೊಸ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸುವ ಯಾವುದೇ ಪ್ರಸ್ತಾವನೆಗಳು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |
| (ಇ) | ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗಡಿ ಭಾಗವಾದ ನಂದಿಕೂರಿನಲ್ಲಿ ಪ್ರಾರಂಭಿಸಬೇಕು ಮತ್ತು ಅಲ್ಲಿ ಬೇಕಾದ ಸ್ಥಳ ಲಭ್ಯವಿರುವುದಾಗಿ ವರದಿಯಾಗಿದ್ದು, ಈ ಬಗ್ಗೆ ಗಮನ ಹರಿಸಿದೆಯೇ; ಹಾಗೂ ಕ್ರಮ ಕೈಗೊಳ್ಳಲು ಪರಿಶೀಲನೆ ನಡೆಸುವುದೇ; (ವಿವರ ಒದಗಿಸುವುದು) | |
| (ಈ) | ಕಡಿಮೆ ಖರ್ಚಿನಲ್ಲಿ ಸಮತಟ್ಟಾದ ಭೂಮಿಯಲ್ಲಿ ವಿಮಾನ ನಿಲ್ದಾಣವನ್ನು ಅಭಿವೃದ್ಧಿ ಪಡಿಸುವಲ್ಲಿ ಸರ್ಕಾರಕ್ಕೆ ಆಗುವ ಉಳಿತಾಯ ಮತ್ತು ಪ್ರಯಾಣಿಕರಿಗೂ ಅನುಕೂಲವಾಗುವ ನಿಟ್ಟಿನಲ್ಲಿ ಸದರಿ ಬೇಡಿಕೆಯನ್ನು ಪರಿಶೀಲಿಸುವುದೇ; ಪ್ರಸ್ತುತ ಇರುವ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಸರ್ಕಾರದ ಮುಂದಿರುವ ಯೋಜನೆಗಳಾವುವು? | ಮಂಗಳೂರು ವಿಮಾನ ನಿಲ್ದಾಣದ ಕಾರ್ಯಚರಣೆ ಮತ್ತು ನಿರ್ವಹಣೆಯನ್ನು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ AAI ಸಂಸ್ಥೆಯ ಮೂಲಕ PPP ಆಧಾರದ ಮೇಲೆ ಖಾಸಗಿ ಸಂಸ್ಥೆಗೆ ವಹಿಸಲಾಗಿರುತ್ತದೆ. ಈ ವಿಮಾನ ನಿಲ್ದಾಣವು AAI ವ್ಯಾಪ್ತಿಗೆ ಒಳಪಡುವುದರಿಂದ ರನ್-ವೇ ವಿಸ್ತರಣೆಗೆ ಕ್ರಮವಹಿಸಲು ಆ ಸಂಸ್ಥೆಯನ್ನು ಕೋರಲಾಗಿದೆ. |

ಸಂಖ್ಯೆ:ಮೂಅಇ 243 ರಾಅವಿ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು